File No.AGRI-AMS/13/2019-AGRI_PLAN_B-AGRICULTURE Secretaria

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2019-20ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಮತ್ತು ತರಬೇತಿ ಅಭಿಯಾನ (NMAET) ಯೋಜನೆಯಡಿ ಕೃಷಿ ವಿಸ್ತರಣೆ ಉಪ ಅಭಿಯಾನ (SAME) ಕಾರ್ಯಕ್ರಮಕ್ಕೆ ಮೊದಲನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2019, ದಿನಾಂಕ: 02.04.2019.
2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 27-2/2019-AE (FTS P-70547), ದಿನಾಂಕ: 11.04.2019.
3. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 29-2/2019-AE, ದಿನಾಂಕ: 24.04.2019.
4. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 36-5/2017-AE/Extn.Desk, ದಿನಾಂಕ: 21.05.2019.
5. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: FD 20 BGL 2019 ದಿನಾಂಕ: 24.05.2019.
6. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಕೃಇ/ಆತ್ಮ/ಅನುದಾನ/2019-20, ದಿನಾಂಕ: 01.06.2019.
7. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಕೃಇ/ಆತ್ಮ/ಅನುದಾನ/ಪತ್ರಗಳು/2019-20, ದಿನಾಂಕ: 01.06.2019.

*****

ಪ್ರಸ್ತಾವನೆ:

2019-20ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆ ಲೆಕ್ಕ ಶೀರ್ಷಿಕೆ: 2401-00-800-1-53 ಅಡಿ ಒಟ್ಟು ರೂ. 8530.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸುತ್ತಾ, ಕೃಷಿ ವಿಸ್ತರಣೆ ಉಪ ಅಭಿಯಾನ (SAME) ಕಾರ್ಯಕ್ರಮಕ್ಕೆ ಒಟ್ಟಾರೆ ರೂ. 2030.00 ಲಕ್ಷ ಅನುದಾನವನ್ನು ಒದಗಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ಕೇಂದ್ರ ಸರ್ಕಾರದ ಪತ್ರದಲ್ಲಿ 2018-19ನೇ ಸಾಲಿನಲ್ಲಿ ಕೃಷಿ ವಿಸ್ತರಣೆ ಉಪ ಅಭಿಯಾನ (SAME) ಕಾರ್ಯಕ್ರಮದಡಿ ಬಿಡುಗಡೆಯಾಗಿ ಬಳಕೆಯಾಗದೇ ಉಳಿದ ಅನುದಾನವನ್ನು ಮರುಮೌಲ್ಯೀಕರಣಗೊಳಿಸಿ 2019-20ನೇ ಸಾಲಿನ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲು ಅನುಮತಿ ನೀಡಲಾಗಿದೆ.

.2..

ಮೇಲೆ ಓದಲಾದ (3)ರ ಕೇಂದ್ರ ಸರ್ಕಾರದ ಪತ್ರದಲ್ಲಿ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಉಪ ಯೋಜನೆ ಕೃಷಿ ವಿಸ್ತರಣೆ ಉಪ ಅಭಿಯಾನ (SAME) ಕಾರ್ಯಕ್ರಮಕ್ಕೆ 2019-20ನೇ ಸಾಲಿನಲ್ಲಿ ಒಟ್ಟಾರೆ ರೂ. 4482.60 ಲಕ್ಷಗಳ ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (4)ರ ಕೇಂದ್ರ ಸರ್ಕಾರದ ಪತ್ರದಲ್ಲಿ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಉಪ ಯೋಜನೆ ಕೃಷಿ ವಿಸ್ತರಣೆ ಉಪ ಅಭಿಯಾನ (SAME) ಕಾರ್ಯಕ್ರಮಕ್ಕೆ ಮೊದಲನೇ ಕಂತಿನ ಕೇಂದ್ರದ ಪಾಲಿನ ಅನುದಾನ ರೂ. 1075.82 ಲಕ್ಷಗಳನ್ನು ಬಿಡುಗಡೆ ಮಾಡಿರುತ್ತದೆ.

ಮೇಲೆ ಓದಲಾದ (5) ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರದಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ರೂ. 1075.82 ಲಕ್ಷಗಳು ರಾಜ್ಯದ ಬೊಕ್ಕಸಕ್ಕೆ ಜಮೆಯಾದ ಕುರಿತು ದೃಢೀಕರಿಸಲಾಗಿದೆ.

ಮೇಲೆ ಓದಲಾದ (6)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಉಪ ಯೋಜನೆ ಕೃಷಿ ವಿಸ್ತರಣೆ ಉಪ ಅಭಿಯಾನ (SAME) ಕಾರ್ಯಕ್ರಮಕ್ಕೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ರೂ. 1075.82 ಲಕ್ಷಗಳಿಗೆ ರಾಜ್ಯದ ಪಾಲಿನ ಶೇ. 40ರಷ್ಟು ಅನುದಾನ ರೂ. 717.22 ಲಕ್ಷಗಳನ್ನು ಸೇರಿಸಿ ಒಟ್ಟಾರೆ ರೂ. 1793.04 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ (7)ರ ಕೃಷಿ ಆಯುಕ್ತರ ಪತ್ರದಲ್ಲಿ 2018-19ನೇ ಸಾಲಿನಲ್ಲಿ ಕೃಷಿ ವಿಸ್ತರಣೆ ಉಪ ಅಭಿಯಾನ (SAME) ಕಾರ್ಯಕ್ರಮದಡಿ ಬಿಡುಗಡೆಯಾಗಿ ಬಳಕೆಯಾಗದೇ ಉಳಿದ ಅನುದಾನ ರೂ. 1103.28 ಲಕ್ಷಗಳನ್ನು (ಕೇಂದ್ರದ ಪಾಲು ರೂ. 661.97 ಲಕ್ಷಗಳು + ರಾಜ್ಯದ ಪಾಲು ರೂ. 441.3 ಲಕ್ಷಗಳು) ಕೇಂದ್ರ ಸರ್ಕಾರವು ಮರುಮೌಲ್ಯೀಕರಣಗೊಳಿಸಿದ್ದು, ಸದರಿ ಅನುದಾನವನ್ನು 2019-20ನೇ ಸಾಲಿನ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 13 ಕೃಉಇ 2019, ಬೆಂಗಳೂರು, ದಿನಾಂಕ: 02.07.2019.**

ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಉಪ ಯೋಜನೆ ಕೃಷಿ ವಿಸ್ತರಣೆ ಉಪ ಅಭಿಯಾನ (SAME) ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಮೊದಲನೇ ಕಂತಿನ ರೂ. 1075.82 ಲಕ್ಷಗಳ ಅನುದಾನಕ್ಕೆ ಪೂರಕವಾಗಿ ರಾಜ್ಯ ಸರ್ಕಾರದ ಪಾಲಿನ ಅನುದಾನ ರೂ. 717.22 ಲಕ್ಷಗಳನ್ನು ಸೇರಿಸಿ ಒಟ್ಟು ರೂ. 1793.04 ಲಕ್ಷಗಳನ್ನು (ಒಂದು ಸಾವಿರದ ಏಳುನೂರ ತೊಂಭತ್ಮೂರು ಲಕ್ಷದ ನಾಲ್ಕು ಸಾವಿರ ರೂಪಾಯಿಗಳು ಮಾತ್ರ) 2019-20ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53ರ ಉಪ ಶೀರ್ಷಿಕೆ (059)ರಡಿ ಬಿಡುಗಡೆ ಮಾಡುತ್ತಾ ಮಂಜೂರಾತಿ ನೀಡಿದೆ.

ಮುಂದುವರೆದು, 2018-19ನೇ ಸಾಲಿನಲ್ಲಿ ಕೃಷಿ ವಿಸ್ತರಣೆ ಉಪ ಅಭಿಯಾನ (SAME) ಕಾರ್ಯಕ್ರಮದಡಿ ಬಿಡುಗಡೆಯಾಗಿ ಬಳಕೆಯಾಗದೇ ಉಳಿದ ಕೇಂದ್ರ ಸರ್ಕಾರದಿಂದ ಮರುಮೌಲ್ಯೀಕರಣಗೊಂಡ ರೂ. 1103.28 ಲಕ್ಷಗಳ (ಒಂದು ಸಾವಿರದ ಒಂದು ನೂರ ಮೂರು ಲಕ್ಷದ ಇಪ್ಪತ್ತೆಂಟು ಸಾವಿರ ರೂಪಾಯಿಗಳು ಮಾತ್ರ) ಅನುದಾನವನ್ನು (ಕೇಂದ್ರದ ಪಾಲು ರೂ. 661.97 ಲಕ್ಷ + ರಾಜ್ಯದ ಪಾಲು ರೂ. 441.3 ಲಕ್ಷಗಳಂತೆ) 2019-20ನೇ ಸಾಲಿನ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲು ಅನುಮತಿ ನೀಡಿದೆ.

ಕೃಷಿ ನಿರ್ದೇಶಕರು ಕೇಂದ್ರ ಸರ್ಕಾರವು ಆಗ್ಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ/01/ಟಿಎಫ್ ಪಿ/2019, ದಿನಾಂಕ: 03.04.2019ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 12 ಆಂಆಸ 2019, ದಿನಾಂಕ: 21.06.2019ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

02/07/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ.
7. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
8. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಧಾರವಾಡ ಮತ್ತು ರಾಯಚೂರು.

9. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
10. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
11. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
12. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
15. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
16. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.